# ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ

ನವನಗರ, ಹುಬ್ಬಳ್ಳಿ – 580025.

**ನ್ಯಾಕ 'ಎ' ಶ್ರೇಣಿ ಮಾನ್ಯತೆ**

ದೂರವಾಣಿ ಸಂಖ್ಯೆ: 0836–2222392
ಫ್ಯಾಕ್ಸ್ : 0836–2223392

ಜಾಲತಾಣ : : www.kslu.karnataka .gov.in
ಇ–ಮೇಲ್: kslu.registrar@gmail.com


ಸಂಖ್ಯೆ: ಕರಾಕಾವಿ/ಆಡಳಿತ/2020–21/ 1662

ದಿನಾಂಕ: 01-03-2021

## ಸುತ್ತೋಲೆ

ವಿಷಯ : ಕಾನೂನಿನ ಪುಸ್ತಕಗಳ ಕನ್ನಡ ಹಸ್ತಪ್ರತಿ ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕನುಸಾರವಾಗಿ ಕಾನೂನು ಶಿಕ್ಷಣದಲ್ಲಿ ದ್ವಿಭಾಷಾ ನೀತಿ ಅನುಷ್ಠಾನಗೊಳಿಸುವ ದಿಸೆಯಲ್ಲಿ ಕರ್ನಾಟಕ ಸರ್ಕಾರದ ನಿರ್ದೇಶನದ ಮೇರೆಗೆ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು ಕನ್ನಡದಲ್ಲಿ ಕಾನೂನು ವಿಷಯಗಳ ಪುಸ್ತಕಗಳನ್ನು ಪ್ರಕಟಿಸುವ ಉದ್ದೇಶವಿಟ್ಟುಕೊಂಡಿದೆ.

ಈ ವಿಷಯಕ್ಕೆ ಸಂಬಂಧಿಸಿದಂತೆ ಕನ್ನಡದಲ್ಲಿ ಕಾನೂನು ವಿಷಯಗಳ ಬಗ್ಗೆ ಗುಣಮಟ್ಟದ, ವಿಶ್ವವಿದ್ಯಾಲಯದ ಪಠ್ಯಕ್ರಮಕ್ಕೆ ಅನುಗುಣವಾಗಿ ಹಾಗೂ ನವೀಕೃತವಾಗಿರುವ ಹಸ್ತಪ್ರತಿಗಳನ್ನು ಬರೆಯಲು ಇಚ್ಛಿಸಿರುವ ಲೇಖಕರು ತಮ್ಮ ಉದ್ದೇಶವನ್ನು ವಿಶ್ವವಿದ್ಯಾಲಯದ ಕುಲಸಚಿವರ ಕಚೇರಿಗೆ ತಿಳಿಸಬೇಕಾಗಿ ಈ ಮೂಲಕ ತಿಳಿಸಲಾಗಿದೆ. ಸದರಿ ವಿಷಯಕ್ಕೆ ಸಂಬಂಧಿಸಿದ ವಿವರವಾದ ಮಾಹಿತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ಕುಲಸಚಿವರು

ಗೆ,

**ವಿಶ್ವವಿದ್ಯಾಲಯ ವ್ಯಾಪ್ತಿಗೊಳಪಟ್ಟ ಎಲ್ಲ ಕಾನೂನು ಮಹಾವಿದ್ಯಾಲಯಗಳಿಗೆ.**

**ಪ್ರತಿಯನ್ನು,**

1. ಆಪ್ತಕಾರ್ಯದರ್ಶಿಗಳು, ಮಾನ್ಯ ಕುಲಪತಿಗಳ ಕಾರ್ಯಾಲಯ, ಕರಾಕಾವಿ, ಹುಬ್ಬಳ್ಳಿ,
2. ಆಪ್ತ ಕಾರ್ಯದರ್ಶಿಗಳು, ಕುಲಸಚಿವರ ಕಾರ್ಯಾಲಯ ಕರಾಕಾವಿ, ಹುಬ್ಬಳ್ಳಿ,
3. ಆಪ್ತ ಕಾರ್ಯದರ್ಶಿಗಳು, ಕುಲಸಚಿವರು (ಮೌಲ್ಯಮಾಪನ), ಕರಾಕಾವಿ, ಹುಬ್ಬಳ್ಳಿ,
4. ಹಣಕಾಸು ಅಧಿಕಾರಿಗಳು, ಕರಾಕಾವಿ, ಹುಬ್ಬಳ್ಳಿ,
5. ನಿರ್ದೇಶಕರು, ಕಾನೂನು ಶಾಲೆ, ಕರಾಕಾವಿ
6. ಉಪಕುಲಸಚಿವರು, ವಿದ್ಯಾಮಂಡಳ ವಿಭಾಗ, ಕರಾಕಾವಿ, ಹುಬ್ಬಳ್ಳಿ
7. ಮುಖ್ಯಸ್ಥರು, ಐ.ಸಿ.ಟಿ. ವಿಭಾಗಕ್ಕೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಜಾಲತಾಣದಲ್ಲಿ ಅಳವಡಿಸಲು).

# ಪ್ರಕಟಣೆ

**ವಿಷಯ : ಕಾನೂನು ಪುಸ್ತಕಗಳ ಕನ್ನಡ ಹಸ್ತಪ್ರತಿ ಒದಗಿಸುವ ಕುರಿತು.**

ಕಾನೂನು ಶಿಕ್ಷಣದಲ್ಲಿ ದ್ವಿಭಾಷಾ ನೀತಿ ಅನುಷ್ಠಾನಗೊಳಿಸುವ ದಿಶೆಯಲ್ಲಿ ಮತ್ತು ಕರ್ನಾಟಕ ಸರ್ಕಾರದ ನಿರ್ದೇಶನದ ಮೇರೆಗೆ ಹಾಗೂ ಸಿಂಡಿಕೇಟ್ ಸಭೆಯ ನಿರ್ಣಯದ ಹಿನ್ನಲೆಯಲ್ಲಿ ವಿಶ್ವವಿದ್ಯಾಲಯವು ಕನ್ನಡದಲ್ಲಿ ಕಾನೂನು ವಿಷಯಗಳ ಪುಸ್ತಕಗಳನ್ನು ಪ್ರಕಟಿಸುವ ಉದ್ದೇಶವಿಟ್ಟು ಕೊಂಡಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಕನ್ನಡದಲ್ಲಿ ಕಾನೂನು ವಿಷಯಗಳ ಬಗ್ಗೆ ಗುಣಮಟ್ಟದ, ವಿಶ್ವವಿದ್ಯಾಲಯದ ಪಠ್ಯಕ್ರಮಕ್ಕೆ ಅನುಗುಣವಾಗಿ ಹಾಗೂ ನವೀಕೃತವಾಗಿರುವ ಹಸ್ತಪ್ರತಿಗಳನ್ನು ಬರೆಯಲು ಇಚ್ಛಿಸಿರುವ ಲೇಖಕರು ತಮ್ಮ ಉದ್ದೇಶವನ್ನು ವಿಶ್ವವಿದ್ಯಾಲಯದ ಕುಲಸಚಿವರ ಕಚೇರಿಗೆ ತಿಳಿಸಬೇಕಾಗಿ ಈ ಮೂಲಕ ತಿಳಿಸಲಾಗಿದೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಪ್ರೋತ್ಸಾಹಕ ಗೌರವಧನವನ್ನು ನೀಡಲಾಗುವುದು ಹಾಗೂ ಕೃತಿಸ್ವಾಮ್ಯ ಹಕ್ಕುಗಳನ್ನು ರಕ್ಷಿಸಲಾಗುವುದು. ಕಾನೂನು ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಧ್ಯಯನ ಮಾಡುತ್ತಿರುವುದರಿಂದ ವಿಶ್ವವಿದ್ಯಾಲಯವು ಈ ಕ್ರಮವನ್ನು ಕೈಗೊಳ್ಳುತ್ತಿದೆ. ಹಸ್ತಪ್ರತಿಯನ್ನು ಸಲ್ಲಿಸುವವರು ತಮ್ಮ ಬರಹದ ಕಾರ್ಯವನ್ನು ಈ ಪ್ರಕಟಣೆ ಪ್ರಕಟಗೊಂಡ ಒಂದು ತಿಂಗಳೊಳಗಾಗಿ ಪೂರ್ಣಗೊಳಿಸಿ ವಿಶ್ವವಿದ್ಯಾಲಯದ ಕುಲಸಚಿವರ ಕಚೇರಿಗೆ ಸಲ್ಲಿಸಬೇಕಾಗಿ ಈ ಮೂಲಕ ತಿಳಿಸಲಾಗಿದೆ. ಈ ಬರಹ ಕಾರ್ಯವನ್ನು ಪೂರ್ಣಗೊಳಿಸುವುದಕ್ಕಾಗಿ ವಿಸ್ತೃತ ಸಮಯ ಬೇಕಾದಲ್ಲಿ ವಿಶ್ವವಿದ್ಯಾಲಯವನ್ನು ಸಂಪರ್ಕಿಸಬಹುದು.

ಒಂದು ವೇಳೆ ಹಸ್ತಪ್ರತಿಯು ಕೂಡಲೇ ಲಭ್ಯವಿಲ್ಲದಲ್ಲಿ ಕನ್ನಡದಲ್ಲಿ ಕಾನೂನು ಪುಸ್ತಕಗಳನ್ನು ಬರೆಯುವ ಯೋಜನೆಯನ್ನು ಹೊಂದಿರುವ ಲೇಖಕರು ಕೂಡ ತಮ್ಮ ಪ್ರಸ್ತಾವನೆಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸಬಹುದು.

ಕುಲಸಚಿವರು